6.2.1

BNMDC | 121 | 2021-22

18/02/2022

# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಸಂ.ನ/2021-22

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ: 15-02-2022

## ಅಧಿಸೂಚನೆ

**ವಿಷಯ : 2021-22ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.**

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಇಡಿ 227 ಯುಎನ್ಇ 2021 ದಿನಾಂಕ:16-09-2021
2. ಕುಲಪತಿಯವರ ಅನುಮೋದನೆ ದಿನಾಂಕ: 14-02-2022

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು, 2021-22ನೇ ಸಾಲಿಗೆ ಬೆಂಗಳೂರಿನ **ಭಾಗೀರತಿ ಬಾಯಿ ನಾರಯಣ್ ರಾವ್ ಮಾನೇ ಕಾಲೇಜು,** ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ, ಮುಂದುವರಿಸಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 150 (ನೂರ ಐವತ್ತು) |
| ಬಿ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 090 (ತೊಂಭತ್ತು) |
| ಎಂ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 40 (ನಲವತ್ತು) |

ನೂತನ ರಾಷ್ಟ್ರೀಯ ಶಿಕ್ಷಣ ನೀತಿ-2020ರನುಸಾರ ರಚಿಸಲ್ಪಟ್ಟ ಕರಡು ವಿನಿಯಮಗಳ ಅನ್ವಯ ಮತ್ತು ಉಲ್ಲೇಖ(1)ರ ಸರ್ಕಾರದ ಆದೇಶದಂತೆ, 2021-22ನೇ ಶೈಕ್ಷಣಿಕ ಸಾಲಿಗೆ ಸೀಮಿತವಾಗಿ ಪ್ರಸ್ತುತ ಸ್ನಾತಕ ಪದವಿ ಕೋರ್ಸು/ಕಾಂಬಿನೇಷನ್‌ವಾರು ಅನುಮೋದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ (Intake) ಹೆಚ್ಚುವರಿಯಾಗಿ 20% ವಿದ್ಯಾರ್ಥಿಗಳನ್ನು ಅನುಮೋದಿಸಲು ಸದರಿ ಆದೇಶದಲ್ಲಿ ನಿಗದಿಪಡಿಸಲಾಗಿರುವ ಷರತ್ತಿಗೊಳಪಟ್ಟು ಅನುಮತಿಸಲಾಗಿರುತ್ತದೆ. Open electiveಗೆ ಸಂಬಂಧಪಟ್ಟ ಹಾಗೆ, ಪ್ರತಿ ಸಂಯೋಜಿತ ಕಾಲೇಜಿನ, ಒಟ್ಟು ಅನುಮೋದಿತ ಕೋರ್ಸ್-ಕಾಂಬಿನೇಷನ್‌ಗಳಲ್ಲಿನ ಪ್ರತಿ ವಿಷಯದ ವಿದ್ಯಾರ್ಥಿ ಪ್ರಮಾಣ (Intake) ಪ್ರಸ್ತುತ ಅನುಮೋದಿತ ವಿದ್ಯಾರ್ಥಿ ಪ್ರಮಾಣದ 50% ಮೀರದಂತೆ ಕ್ರಮ ವಹಿಸುವುದು. Open elective ಗೆ ಸಂಬಂಧಪಟ್ಟ ಹಾಗೆ ಮೇಲೆ ತಿಳಿಸಲಾದ ಪ್ರತಿ ವಿಷಯದ ಶೇಕಡವಾರು ವಿದ್ಯಾರ್ಥಿ ಪ್ರಮಾಣವನ್ನು ವಿಶ್ವವಿದ್ಯಾಲಯವು ಅವಶ್ಯಕತೆ ಅನುಗುಣವಾಗಿ ಮಾರ್ಪಡಿಸಿಕೊಳ್ಳಬಹುದಾಗಿದೆ.

---

__ವಿ.ಸೂ:__ *2021-22ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟು ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.*

---

__ಷರತ್ತುಗಳು:__

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. *ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021 ದಿನಾಂಕ: 12-02-2021ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಎರಡು ವರ್ಷಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು Defined Parameters ಗಳನ್ನು ಪೂರೈಸಲು ಕ್ರಮವಹಿಸತಕ್ಕದ್ದು.*
3. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
4. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
5. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.



Principal Grade-1
B.N.M. Degree College
Banashankari 2nd Stage,
Bangalore-560 070.